ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 20ನೇ ಮಾರ್ಚ್, 2020

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೇ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:-**

ದಿನಾಂಕ: 06.03.2020ರ 2ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಅಬ್ಬಯ್ಯ ಪ್ರಸಾದ್ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 24(18) : ಮಾನ್ಯ ನಗರಾಭಿವೃದ್ಧಿ ಸಚಿವರು

ಇ) **ವರ್ಗಾವಣೆಗೊಂಡ ಪ್ರಶ್ನೆ:-**

1. ದಿನಾಂಕ: 09.03.2020ರ 3ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ನಿಸರ್ಗ ನಾರಾಯಣಸ್ವಾಮಿ ಎಲ್.ಎನ್. ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 32(752) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು
2. ದಿನಾಂಕ: 09.03.2020ರ 3ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಡಿ.ಎಸ್. ಸುರೇಶ್ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 37(90) : ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೇ ಪಟ್ಟಿ

2. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1. ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಕೆಲವು ಅಧಿನಿಯಮಗಳು ಮತ್ತು ಪ್ರಾದೇಶಿಕ ಕಾನೂನುಗಳನ್ನು ನಿರಸನಗೊಳಿಸುವ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. ಶ್ರೀ ಸಿ.ಸಿ. ಪಾಟೀಲ್ (ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ (ಕ್ರಷರ್‌ಗಳ) ನಿಯಂತ್ರಣ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ವಿತ್ತೀಯ ಕಾರ್ಯಕಲಾಪಗಳು

1) 2020–21ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ

ಹಾಗೂ

1 ರಿಂದ 28 ರವರೆಗಿನ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ

2) 2019–20ನೇ ಸಾಲಿನ ಪೂರಕ ಅಂದಾಜುಗಳ (3ನೇ ಹಾಗೂ ಅಂತಿಮ ಕಂತು) ಮೇಲೆ ಚರ್ಚೆ.

4. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಡಾ: ಅಶ್ವತ್ಥನಾರಾಯಣ ಸಿ.ಎನ್. (ಮಾನ್ಯ ಉಪ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್.ಕೆ. ಪಾಟೀಲ್, ಆರಗ ಜ್ಞಾನೇಂದ್ರ, ನೆಹರು ಚ. ಓಲೇಕಾರ್, ಕೆ. ರಘುಪತಿ ಭಟ್, ಲಾಲಾಜಿ ಆರ್. ಮೆಂಡನ್, ಎ.ಟಿ. ರಾಮಸ್ವಾಮಿ ಹಾಗೂ ಇವರುಗಳು –** 2011ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್‌ಗಳ ನೇಮಕಾತಿಯಲ್ಲಿ ಆದ ವಿಳಂಬ, ಕರ್ನಾಟಕ ಆಡಳಿತ ಮಂಡಳಿಯ ಆದೇಶ, ಸಚಿವ ಸಂಪುಟ ಸಭೆಯ ನಿರ್ಣಯ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶಕ್ಕೆ ಅನುಗುಣವಾಗಿ ಅಡ್ವೋಕೇಟ್ ಜನರಲ್ ಅವರು ನೀಡಿರುವ ಅಭಿಪ್ರಾಯಗಳ ದಾಖಲೆಗಳ ಅನುಸಾರ ಸದರಿ ಪ್ರಕರಣದಲ್ಲಿ ಸಂವಿಧಾನದ ಅನುಚ್ಛೇದ 323(2)ರ ಉಲ್ಲಂಘನೆಯಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

... 4/ ..

2) **ಶ್ರೀಯುತರುಗಳಾದ ಕೆ. ಮಾಡಾಳು ವಿರೂಪಾಕ್ಷಪ್ಪ, ಬಿ.ಸಿ. ನಾಗೇಶ್ ಹಾಗೂ ಶಂಕರ ಬಿ. ಪಾಟೀಲ ಮುನೇನಕೊಪ್ಪ ಇವರುಗಳು** – ದಾವಣಗೆರೆ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿನ ರೈತರು ಅಮೃತ್ ಮಹಲ್ ಕಾವಲಿನಲ್ಲಿ ಅನಧಿಕೃತವಾಗಿ ಸಾಗುವಳಿ ಮಾಡುತ್ತಿದ್ದು, ಇವರುಗಳಿಗೆ ಸಾಗುವಳಿ ಚೀಟಿಯನ್ನು ನೀಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

3) **ಶ್ರೀಯುತರುಗಳಾದ ಕೆ.ಜೆ. ಜಾರ್ಜ್, ಕೃಷ್ಣಬೈರೇಗೌಡ, ಬಿ.ಎಸ್. ಸುರೇಶ್, ಶ್ರೀಮತಿ ಸೌಮ್ಯ ರೆಡ್ಡಿ ಹಾಗೂ ರಿಜ್ವಾನ್ ಅರ್ಷದ್ ಇವರುಗಳು** – ಬೆಂಗಳೂರು ಸಮಗ್ರ ಅಭಿವೃದ್ಧಿಗೆ ಎಲ್ಲಾ ಇಲಾಖೆಗಳನ್ನು ಒಟ್ಟುಗೂಡಿಸಿ ಮಂಡಿಸಿರುವ ಪ್ರತ್ಯೇಕ ಕಾಯ್ದೆ ಮತ್ತು ಆಡಳಿತ ಸುಧಾರಣೆ ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

4) **ಶ್ರೀಯುತರುಗಳಾದ ಹೆಚ್. ಹಾಲಪ್ಪ, ಬಿ.ಸಿ.ನಾಗೇಶ್ ಹಾಗೂ ಎಂ.ಪಿ. ಅಪ್ಪಚ್ಚು (ರಂಜನ್) ಇವರುಗಳು** – ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರಗಳನ್ನು ವಿಜಯಪುರದ ಮಹಿಳಾ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿಸುತ್ತಿರುವುದರಿಂದ ಉಂಟಾಗುತ್ತಿರುವ ತೊಂದರೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

5) **ಶ್ರೀಯುತರುಗಳಾದ ಗೂಳಿಹಟ್ಟಿ ಡಿ. ಶೇಖರ್, ಡಿ.ಎಸ್. ಸುರೇಶ್ ಹಾಗೂ ಜಿ. ಸೋಮಶೇಖರ ರೆಡ್ಡಿ ಇವರುಗಳು** – ಚಿತ್ರದುರ್ಗ ಜಿಲ್ಲೆಯ ಶ್ರೀ ವಿನಾಯಕ ಸಂಯುಕ್ತ ಪದವಿಪೂರ್ವ ಕಾಲೇಜಿನ ಮಾನ್ಯತೆ ರದ್ದುಪಡಿಸಿ ವೇತಾನುದಾನ ಹಿಂಪಡೆಯಲು ಶಿಫಾರಸ್ಸು ಮಾಡಿರುವ ಆದೇಶದ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ

6) **ಶ್ರೀಯುತರುಗಳಾದ ಎನ್. ಮಹೇಶ್, ಸುರೇಶ್ ಗೌಡ ಹಾಗೂ ಡಾ. ಕೆ. ಅನ್ನದಾನಿ ಇವರುಗಳು** – ಬೆಂಗಳೂರು ನಗರದ ನಂದಿನಿ ಲೇಔಟ್ ವಾರ್ಡ್‌ನ ರಾಮಕೃಷ್ಣನಗರದಲ್ಲಿರುವ ಮಕ್ಕಳ ಆಟದ ಮೈದಾನವನ್ನು ಬಿಡಿಎ ವತಿಯಿಂದ ಸಿ.ಎ. ನಿವೇಶನವೆಂದು ವಿವಿಧ ಸಂಸ್ಥೆಗಳಿಗೆ ಹಂಚಿಕೆ ಮಾಡಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

7) **ಶ್ರೀಯುತರುಗಳಾದ ಕೆ.ಆರ್. ರಮೇಶ್ ಕುಮಾರ್, ಕೃಷ್ಣಬೈರೇಗೌಡ, ವಿ. ಮುನಿಯಪ್ಪ, ಟಿ. ವೆಂಕಟರಮಣಯ್ಯ, ಎಸ್.ಎನ್. ನಾರಾಯಣಸ್ವಾಮಿ ಹಾಗೂ ಇತರರು** – ಎತ್ತಿನಹೊಳೆ ಯೋಜನೆಗೆ ಅಗತ್ಯ ಅನುದಾನ ಮತ್ತು ಪ್ರಾಮುಖ್ಯತೆ ನೀಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಕೃಷ್ಣಬೈರೇಗೌಡ ಅವರು** – ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿರುವ ಯಲಹಂಕ ತಾಲ್ಲೂಕು ತಹಸೀಲ್ದಾರ್ ರವರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ ಅವರು** – ಬೆಳಗಾವಿ ಜಿಲ್ಲೆ ರಾಯಭಾಗ ಮತಕ್ಷೇತ್ರದ ಕಂಕನವಾಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಗೈರಾಣ ಜಮೀನಿಗೆ ಖಾಸಗಿ ವ್ಯಕ್ತಿಗಳ ಹೆಸರಿನಲ್ಲಿ ನಕಲಿ ದಾಖಲಾತಿಗಳನ್ನು ಸೃಷ್ಟಿಸಲು ಸಹಕರಿಸಿರುವ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

3) **ಶ್ರೀ ಈಶ್ವರ ಬಿ. ಖಂಡ್ರೆ ಅವರು** – ಬೀದರ್‌ನಲ್ಲಿರುವ ಕರ್ನಾಟಕ ಪಶು ವೈದ್ಯಕೀಯ, ಪಶು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳಲ್ಲಿ ನಡೆದಿರುವ ಭ್ರಷ್ಟಾಚಾರದ ಬಗ್ಗೆ ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

4) **ಶ್ರೀ ಹರೀಶ್ ಪೂಂಜ ಅವರು** – ಎಂಡೋಸಲ್ಫಾನ್ ಪೀಡಿತರಿಗೆ ಕೊಕ್ಕಡದ ಮಾದರಿಯಲ್ಲಿ ಎಂಡೋಪಾಲನಾ ಕೇಂದ್ರಗಳನ್ನು ಸರ್ಕಾರವೇ ನಿರ್ವಹಣೆ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5) **ಶ್ರೀ ಆನಂದ ಸಿದ್ದು ನ್ಯಾಮಗೌಡ ಅವರು** – ಜಮಖಂಡಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಕೃಷ್ಣಾ ನದಿಗೆ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಜಲ ಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

6) **ಶ್ರೀ ಆರ್. ಮಂಜುನಾಥ್ ಮತ್ತು ಇತರರು** – ದಾಸರಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7) **ಡಾ|| ಭರತ್ ಶೆಟ್ಟಿ ವೈ ಅವರು** – ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ ಮೊತ್ತವನ್ನು ಪರಿಷ್ಕರಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

8) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ವಿವಿಧ ಕಾಮಗಾರಿಗಳಿಗಾಗಿ ಮಂಜೂರು ಮಾಡಿದ್ದ ಅನುದಾನವನ್ನು ತಡೆಹಿಡಿದಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

9) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಸರ್ಕಾರದ ಹಂತದಲ್ಲಿ ಕಡತ ವಿಲೇವಾರಿಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

10) **ಶ್ರೀ ವೆಂಕಟರಾವ್ ನಾಡಗೌಡ ಅವರು** – ಸಿಂಧನೂರು ನಗರಸಭೆ ವ್ಯಾಪ್ತಿಯಲ್ಲಿ ಸಾರ್ವಜನಿಕರು ಅನುಭವಿಸುತ್ತಿರುವ ಕುಡಿಯುವ ನೀರಿನ ತೊಂದರೆಯ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

11) **ಶ್ರೀ ಗಣೇಶ್ ಪ್ರಕಾಶ್ ಹುಕ್ಕೇರಿ ಅವರು** – ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲ್ಲೂಕಿನ ನೇಜ್ ಗ್ರಾಮಕ್ಕೆ ಸಮರ್ಪಕವಾಗಿ ವಿದ್ಯುತ್ ಪೂರೈಕೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

12) **ಶ್ರೀ ಅಭಯ ಪಾಟೀಲ ಅವರು** – ಬೆಳಗಾವಿ ದಕ್ಷಿಣ ಮತಕ್ಷೇತ್ರ ವ್ಯಾಪ್ತಿಯ ವಡಗಾವಿಯಲ್ಲಿ ಸರ್ಕಾರಿ ಪದವಿ ಕಾಲೇಜು ಆರಂಭಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ) ಗಮನ ಸೆಳೆಯುವುದು.

13) **ಶ್ರೀ ಬಿ.ಕೆ. ಸಂಗಮೇಶ್ವರ ಅವರು** – ಭದ್ರಾವತಿ ನಗರದಲ್ಲಿರುವ ಮೈಸೂರು ಕಾಗದ ಕಾರ್ಖಾನೆ ಮತ್ತು ಸಕ್ಕರೆ ಕಾರ್ಖಾನೆಯನ್ನು ಪುನಃ ಪ್ರಾರಂಭಿಸುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯುವುದು.

14) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹಾಸನ ಜಿಲ್ಲೆಯ ಹೊಳೆನರಸೀಪುರ ಪಟ್ಟಣದಲ್ಲಿ ಪೌರಕಾರ್ಮಿಕರು, ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ/ ಪಂಗಡದ ಹಾಗೂ ಹಿಂದುಳಿದ ವರ್ಗದ ಫಲಾನುಭವಿಗಳಿಗೆ ಮನೆಗಳನ್ನು ನಿರ್ಮಿಸುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯವುದು.

15) **ಶ್ರೀ ದೊಡ್ಡನಗೌಡ ಜಿ. ಪಾಟೀಲ ಅವರು** – ಹುನಗುಂದ ತಾಲ್ಲೂಕಿನ ಮರೋಳ ಏತ ನೀರಾವರಿ 2ನೇ ಹಂತದ ಹನಿ ನೀರಾವರಿ ಯೋಜನೆಯು ಕಳಪೆ ಗುಣಮಟ್ಟದಿಂದ ಕೂಡಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯವುದು.

16) **ಶ್ರೀ ಡಿ.ಎಸ್. ಹೂಲಗೇರಿ ಅವರು** – ಲಿಂಗಸುಗೂರು ಪಟ್ಟಣದಲ್ಲಿ ಒಳಚರಂಡಿ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯವುದು.

17) **ಶ್ರೀ ಹೆಚ್.ಕೆ. ಪಾಟೀಲ್ ಅವರು** – ಸರ್ಕಾರದಲ್ಲಿ ಖಾಲಿಯಿರುವ ಹುದ್ದೆಗಳಿಗೆ ಕ್ಷೇಮಾಭಿವೃದ್ಧಿ ದಿನಗೂಲಿ ನೌಕರರನ್ನು ಪರಿಗಣಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

18) **ಶ್ರೀ ದೇವಾನಂದ ಫೂಲಸಿಂಗ ಚವ್ಹಾಣ ಅವರು** – ವಿಜಯಪುರ ಜಿಲ್ಲೆಯ ಚಡಚಣ ತಾಲ್ಲೂಕಿನ ಕೃಷಿ ಇಲಾಖೆಯಲ್ಲಿ ರೈತರಿಗೆ ವಿತರಿಸಬೇಕಾದ ಸಾಮಗ್ರಿಗಳನ್ನು ಅಕ್ರಮವಾಗಿ ಹೊರ ರಾಜ್ಯಗಳಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

19) **ಶ್ರೀ ಅಮೃತ ಅಯ್ಯಪ್ಪ ದೇಸಾಯಿ ಅವರು** – ಧಾರವಾಡ ಜಿಲ್ಲೆಯ ಹುಬ್ಬಳ್ಳಿ–ಗಬ್ಬೂರು ಕ್ರಾಸ್ ಟೋಲ್‌ಗೇಟ್‌ನಿಂದ ಧಾರವಾಡ ಬೈಪಾಸ್ ನರೇಂದ್ರ ಕ್ರಾಸ್‌ವರೆಗಿನ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಉನ್ನತೀಕರಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಗಮನ ಸೆಳೆಯುವುದು.

20) **ಶ್ರೀ ಕೆ.ವೈ. ನಂಜೇಗೌಡ ಅವರು** – ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ವತಿಯಿಂದ ನಿರ್ಮಿಸಲಾಗುತ್ತಿರುವ ಎಂ.ವಿ.ಕೆ. ಗೋಲ್ಡನ್ ಡೇರಿ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

21) **ಶ್ರೀ ಅಶ್ವಿನ್ ಕುಮಾರ್ ಎಂ. ಅವರು** – ಟಿ. ನರಸೀಪುರ ವಿಧಾನಸಭಾ ಕ್ಷೇತ್ರದ ಸೋಮನಾಥಪುರದಲ್ಲಿ ಆರೋಗ್ಯ ಇಲಾಖೆಯ ವಶದಲ್ಲಿರುವ ಜಮೀನನ್ನು ಪ್ರವಾಸೋದ್ಯಮ ಇಲಾಖೆಯ ವಶಕ್ಕೆ ಪಡೆದು ಪ್ರವಾಸಿಗರಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಬಗ್ಗೆ ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಸಬಲೀಕರಣ ಮತ್ತು ಕ್ರೀಡಾ ಸಚಿವರ ಗಮನ ಸೆಳೆಯುವುದು.

22) **ಶ್ರೀ ರಾಜಕುಮಾರ ಪಾಟೀಲ ತೇಲ್ಕೂರ ಅವರು** – ಕಲ್ಯಾಣ ಕರ್ನಾಟಕ ಪ್ರದೇಶದ ಅಭ್ಯರ್ಥಿಗಳನ್ನು 371 (ಜೆ) ಅಡಿ ನೇಮಕ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

23) **ಶ್ರೀ ಎಂ.ಪಿ. ಕುಮಾರಸ್ವಾಮಿ ಅವರು** – ಮೂಡಿಗೆರೆ ತಾಲ್ಲೂಕು ಕಳಸಾ ಹೋಬಳಿ ಸಂಸೆ ಗ್ರಾಮದಲ್ಲಿ ರೈತರು ಕೃಷಿ ಮಾಡುತ್ತಿರುವ ಅರಣ್ಯ ಭೂಮಿಯನ್ನು ಕಂದಾಯ ಇಲಾಖೆಗೆ ಹಸ್ತಾಂತರಿಸಿ ರೈತರಿಗೆ ಶಾಶ್ವತ ಪರಿಹಾರವನ್ನು ನೀಡುವ ಬಗ್ಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

24) **ಶ್ರೀ ಕೃಷ್ಣ ಬೈರೇಗೌಡ ಅವರು** – 2019ನೇ ಸಾಲಿನ ಮುಂಗಾರು ಹಂಗಾಮಿನ ವಿಮಾ ಪರಿಹಾರ ಹಣವನ್ನು ನೋಂದಾಯಿತ ರೈತರಿಗೆ ನೀಡದಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

25) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ಹೊಸದುರ್ಗ ತಾಲ್ಲೂಕಿನ ಕೆಲ್ಲೋಡು ಬಳಿ ಕುಡಿಯುವ ನೀರಿಗೆ ನಿರ್ಮಿಸಿದ್ದ ಬ್ಯಾರೇಜ್‌ನ್ನು ಪುನರ್ ನಿರ್ಮಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

26) **ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಅವರು** – ಬಂಗಾರಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಉಂಟಾಗಿರುವ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

27) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಹಾಸನ ಜಿಲ್ಲೆ ರಾಷ್ಟ್ರೀಯ ಹೆದ್ದಾರಿ 75ರಲ್ಲಿನ ಚತುಷ್ಪಥ ರಸ್ತೆಯ ಕಾಮಗಾರಿ ವಿಳಂಬದ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಗಮನ ಸೆಳೆಯುವುದು.

28) **ಶ್ರೀ ಉಮಾನಾಥ ಎ. ಕೋಟ್ಯಾನ್ ಅವರು** – ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಕೋಟಿ ಚೆನ್ನಯ್ಯ ವಿಮಾನ ನಿಲ್ದಾಣ ಎಂದು ನಾಮಕರಣ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

29) **ಶ್ರೀ ಕೆ. ಮಹದೇವ ಅವರು** – ಪಿರಿಯಾಪಟ್ಟಣ ಕ್ಷೇತ್ರದ ರಾಶೀಮಂಟಿ ಕಾವಲಿನಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಕಟ್ಟಡ ನಿರ್ಮಾಣಕ್ಕೆ ಅರಣ್ಯ ಇಲಾಖೆಯ ಅಧಿಕಾರಿಗಳು ಅಡ್ಡಿಪಡಿಸುತ್ತಿರುವ ಬಗ್ಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

... 9/ ..

30) **ಶ್ರೀ ಮಸಾಲ ಜಯರಾಂ ಅವರು** – ತುರುವೇಕೆರೆ ವಿಧಾನಸಭಾ ಕ್ಷೇತ್ರದ ಪಟ್ಟಣ ಪಂಚಾಯಿತಿ ಮತ್ತು ತಾಲ್ಲೂಕು ವ್ಯಾಪ್ತಿಯಲ್ಲಿ ಇರುವ ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳು ಒತ್ತುವರಿ ಮಾಡಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

31) **ಶ್ರೀ ಆನಂದ ಸಿದ್ದು ನ್ಯಾಮಗೌಡ ಅವರು** – ಜಮಖಂಡಿ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಆಹಾರ ಸಾಮಗ್ರಿಗಳನ್ನು ವಿತರಣೆ ಮಾಡುತ್ತಿರುವ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

32) **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ ಮತ್ತು ಕೆ.ಎಸ್. ಲಿಂಗೇಶ್ ಅವರುಗಳು** – ಹಾಸನ ಜಿಲ್ಲೆಯ ವಿವಿಧ ಕಾಮಗಾರಿಗಳಿಗಾಗಿ ಅರ್ಹ ಗುತ್ತಿಗೆದಾರರುಗಳಿಂದ ಕರೆಯಲಾಗಿರುವ ಇ–ಪ್ರಕ್ಯೂರ್‌ಮೆಂಟ್ ಆನ್‌ಲೈನ್ ಟೆಂಡರ್‌ನ್ನು ರದ್ದುಗೊಳಿಸಿ ಮರು ಟೆಂಡರ್‌ನ್ನು ಕರೆಯುವ ಹಾಗೂ ಟೆಂಡರ್‌ನಲ್ಲಿ ಅಕ್ರಮವಾಗಿರುವ ಬಗ್ಗೆ ತನಿಖೆ ಮಾಡುವ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm